# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 93 |
| ಮಾನ್ಯ ಸದಸ್ಯರ ಹೆಸರು | : | ಡಾ: ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19-12-2022 |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಬಸವಕಲ್ಯಾಣ ಮತ್ತು ಹುಮನಾಬಾದ್ ತಾಲ್ಲೂಕುಗಳಲ್ಲಿ ಪ್ರವಾಸೋದ್ಯಮ ನಿಗಮದಿಂದ ನಡೆಯುತ್ತಿರುವ ಹೋಟೆಲ್‌ಗಳು ಕೆಲವು ವರ್ಷಗಳಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಬೀದರ್ ಜಿಲ್ಲೆಯ ಬಸವ ಕಲ್ಯಾಣ ಮತ್ತು ಹುಮನಾಬಾದ್ ತಾಲ್ಲೂಕುಗಳಲ್ಲಿರುವ 02 ಹೋಟೆಲ್ ಘಟಕಗಳ ಮುಂದೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ಪ್ರಗತಿಯಲ್ಲಿದ್ದರಿಂದ, ವ್ಯಾಪಾರ ವಹಿವಾಟು ಇಲ್ಲದ ಕಾರಣ ಘಟಕಗಳನ್ನು ಖಾಸಗಿ ರಿಯಾಯಿತಿದಾರರು ಮುಚ್ಚಿರುತ್ತಾರೆ. ರಿಯಾಯಿತಿದಾರರು ರಿಯಾಯಿತಿ ಕರಾರಿನ ಅನ್ವಯ ಹೋಟೆಲ್‌ಗಳನ್ನು ನಿರ್ವಹಣೆ ಮಾಡದೇ ಇರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.) ಮತ್ತು ರಿಯಾಯಿತಿದಾರರ ನಡುವಿನ ರಿಯಾಯಿತಿ ಕರಾರನ್ನು ರದ್ದುಗೊಳಿಸಿ, ಘಟಕಗಳನ್ನು ಕೆ.ಎಸ್.ಟಿ.ಡಿ.ಸಿ. ಸ್ವಾಧೀನಕ್ಕೆ ಹಿಂಪಡೆದುಕೊಳ್ಳಲಾಗಿರುತ್ತದೆ.<br><br>ಈ 02 ಹೋಟೆಲ್‌ಗಳನ್ನು ಮುಚ್ಚಲಾಗಿದ್ದ ಅವಧಿಗೆ ಕರಾರಿನಂತೆ ರಿಯಾಯಿತಿದಾರರ ಠೇವಣಿಯಿಂದ ರಿಯಾಯಿತಿ ಮೊತ್ತವನ್ನು ಕೆ.ಎಸ್.ಟಿ.ಡಿ.ಸಿ.ಯು ಪಡೆದಿರುತ್ತದೆ. |
| ಆ) | ಹಾಗಿದ್ದಲ್ಲಿ, ಸ್ಥಗಿತಗೊಂಡಿರುವುದಕ್ಕೆ ಕಾರಣವೇನು ಮತ್ತು ಇದರಿಂದ ಪ್ರವಾಸೋದ್ಯಮ ಇಲಾಖೆಗೆ ನಷ್ಟವಾಗುವುದಿಲ್ಲವೇ; | |
| ಇ) | ಸ್ಥಗಿತಗೊಂಡಿರುವ ಹೋಟೆಲ್‌ಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಿಂದ ಈ 02 ಹೋಟೆಲ್‌ಗಳನ್ನು ಟೆಂಡರ್ ಮೂಲಕ ಖಾಸಗಿ ರಿಯಾಯಿತಿದಾರರಿಗೆ ನೀಡಲು ಕ್ರಮ ಕೈಗೊಳ್ಳಲಾಗಿದ್ದು, Expression of Interest ಪ್ರಕ್ರಿಯೆ ಪ್ರಗತಿಯಲ್ಲಿದೆ. |

TOR 306 TDV 2022

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು